## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 591
2. ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ ( ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 11.07.2023
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್‌ನ ಬಿ.ಎಸ್.ಎಸ್.ಕೆ ಕಾರ್ಖಾನೆಯನ್ನು ಖಾಸಗೀಕರಣ ಮಾಡಲು ಸರ್ಕಾರ ಆಲೋಚಿಸಿದೆಯೆ; ಹಾಗಿದ್ದಲ್ಲಿ ಯಾವ ಕಾಲಮಿತಿ ಒಳಗೆ ಖಾಸಗಿಯವರಿಗೆ ನೀಡಲಾಗುವುದು ಮತ್ತು ಪ್ರಾರಂಭ ಮಾಡಲಾಗುವುದು; | ದುಡಿಯುವ ಬಂಡವಾಳದ ಕೊರತೆ ಮತ್ತು ಆರ್ಥಿಕ ಸಂಕಷ್ಟದಿಂದಾಗಿ ಬೀದರ್ ಜಿಲ್ಲೆ ಹುಮನಾಬಾದ್‌ನಲ್ಲಿರುವ ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆಯು 2022-23ನೇ ಸಾಲಿನಲ್ಲಿ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಿರುತ್ತದೆ. ಆರ್ಥಿಕ ಸಂಕಷ್ಟದಿಂದಾಗಿ ಸ್ಥಗಿತಗೊಂಡಿರುವ ಸಕ್ಕರೆ ಕಾರ್ಖಾನೆಗಳನ್ನು ಧೀರ್ಘಾವಧಿಗೆ ಖಾಸಗಿಯವರಿಗೆ ಗುತ್ತಿಗೆ ನೀಡಲು ನೀಡುವುದರ ಮೂಲಕ ಪುನಶ್ಚೇತನಗೊಳಿಸುವ ಸರ್ಕಾರದ ನೀತಿಯಂತೆ ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆಯನ್ನು ಎಲ್.ಆರ್.ಓ.ಟಿ. ಆಧಾರದ ಮೇಲೆ 40 ವರ್ಷಗಳ ಅವಧಿಗೆ ಖಾಸಗಿಯವರಿಗೆ ಗುತ್ತಿಗೆ ನೀಡಲು ಸರ್ಕಾರದ ಆದೇಶ ಸಂಖ್ಯೆ : ಸಿಐ 107 ಸಿಓಎಫ್ 2022 (ಭಾಗ-3), ದಿನಾಂಕ:10.01.2023 ರ ಆದೇಶಲ್ಲಿ ಅನುಮತಿಯನ್ನು ನೀಡಲಾಗಿರುತ್ತದೆ.<br>ಪ್ರಸ್ತುತ, ಕಾರ್ಖಾನೆಯಿಂದ ಎರಡು ಬಾರಿ ಟೆಂಡರ್ ಪ್ರಕ್ರಿಯೆಯನ್ನು ಕೈಗೊಂಡಿದ್ದು, ಸದರಿ ಟೆಂಡರ್ ಪ್ರಕ್ರಿಯೆಗಳಲ್ಲಿ ಯಾವೊಬ್ಬ ಬಿಡ್ಡುದಾರರು ಭಾಗವಹಿಸಿರುವುದಿಲ್ಲ ಹಾಗೂ ದಿನಾಂಕ:24.02.2023 ಮತ್ತು 09.03.2023ರಂದು ಜರುಗಿದ ಪ್ರಿ-ಬಿಡ್ ಸಭೆಗಳಲ್ಲಿ ಭಾಗವಹಿಸಿದ ಆಸಕ್ತ ಬಿಡ್ಡುದಾರರು ಟೆಂಡರ್ ಡಾಕ್ಯೂಮೆಂಟ್‌ನಲ್ಲಿನ ಹಾಗೂ ಸರ್ಕಾರದ ಆದೇಶದಲ್ಲಿನ ಕೆಲವೊಂದು ಷರತ್ತುಗಳನ್ನು ತಿದ್ದುಪಡಿ ಮಾಡಲು/ ಬದಲಾವಣೆ ಮಾಡಲು ಕೋರಿರುತ್ತಾರೆ. ಪ್ರಸ್ತುತ ಸದರಿ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| (ಆ) | ಕಾರ್ಖಾನೆ ಮುಚ್ಚಿದ ಕಾರಣ ಅನೇಕ ರೈತರು ಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ ರೈತರ ಹಾಗೂ ಕಾರ್ಖಾನೆ ಸಿಬ್ಬಂದಿಗಳ ತೊಂದರೆಯನ್ನು ಯಾವ ಕಾಲಮಿತಿಯಲ್ಲಿ ಪರಿಹರಿಸಲಾಗುವುದು; | ಬಂದಿದೆ.<br>ಟೆಂಡರ್ ಡಾಕ್ಯೂಮೆಂಟ್‌ನಲ್ಲಿನ ಹಾಗೂ ಸರ್ಕಾರದ ಆದೇಶದಲ್ಲಿನ ಕೆಲವೊಂದು ಷರತ್ತುಗಳನ್ನು ತಿದ್ದುಪಡಿ ಮಾಡಲು/ ಬದಲಾವಣೆ ಮಾಡಲು ಕೋರಿರುವ ಪ್ರಸ್ತಾವನೆಯ ಕುರಿತು ಸೂಕ್ತ ತೀರ್ಮಾನವನ್ನು ಕೈಗೊಂಡ ನಂತರ, ರೈತರ ಮತ್ತು ಕಾರ್ಮಿಕರ ಹಿತವನ್ನು ಕಾಪಾಡುವ ದೃಷ್ಟಿಯಿಂದ ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆಯಲ್ಲಿ ಕಬ್ಬು ಅರೆಯುವ ಸಲುವಾಗಿ ಖಾಸಗಿಯವರಿಗೆ ಗುತ್ತಿಗೆ ನೀಡಲು ಟೆಂಡರ್ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು. |
| (ಇ) | ಕಾರ್ಮಿಕರ ಅನೇಕ ತಿಂಗಳ ವೇತನ ಬಾಕಿ ಇದ್ದು, ವೇತನವನ್ನು ಯಾವ ಕಾಲಮಿತಿ ಒಳಗೆ ನೀಡಲಾಗುವುದು? | ಕಾರ್ಖಾನೆಯ ಕಾರ್ಮಿಕರಿಗೆ 2016-17ನೇ ಸಾಲಿನಿಂದ 2022-23ನೇ ಸಾಲಿನವರೆಗೆ ಪಾವತಿಸಬೇಕಾದ ವೇತನ ಬಾಕಿ ಮೊತ್ತ ರೂ.1952.65ಲಕ್ಷಗಳಷ್ಟಿರುತ್ತದೆ. ಕಾರ್ಖಾನೆಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡುವ ಮೂಲಕ ಪುನಶ್ಚೇತನಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದ್ದು, ಗುತ್ತಿಗೆದಾರರು ಪಾವತಿಸುವ ಗುತ್ತಿಗೆ ಮೊತ್ತದಿಂದ ನಿಯಮಾನುಸಾರ ಕಾರ್ಖಾನೆಯ ಕಾರ್ಮಿಕರ ವೇತನ ಮತ್ತು ಇತರೆ ಭತ್ಯೆಗಳನ್ನು ಪಾವತಿಸಲು ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ:** ಸಿಐ 220 ಸಿಓಎಫ್ 2023

(ಶಿವಾನಂದ ಎಸ್.ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು